# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕೋರಮಂಗಲ ಉಪ-ವಿಭಾಗದ, ಜಕ್ಕಸಂದ್ರ ವಾರ್ಡ್ ಸಂಖ್ಯೆ-173 ದಿನಾಂಕ: 10-11-2020 ರಂದು ನವೆಂಬರ್-2020 ಮಾಹೆಯ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಶ್ರೀ ಸಂಜೀವ್‌ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173ರ ರವರ ಅಧ್ಯಕ್ಷತೆಯಲ್ಲಿ ಗ್ರಂಥಾಲಯ ಕಟ್ಟಡ, ಉದ್ಯಾನವನ ಹತ್ತಿರ, ಹೆಚ್.ಎಸ್.ಆರ್. 5ನೇ ಸೆಕ್ಟರ್, ಜಕ್ಕಸಂದ್ರ, (ಜಕ್ಕಸಂದ್ರ ವಾರ್ಡ್ ಕಛೇರಿ, ಬಿ.ಬಿ.ಎಂ.ಪಿ) ಬೆಂಗಳೂರು ದಿನಾಂಕ: 10.11.2020 ರಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು:

**ಹಾಜರಿದ್ದ ಸದಸ್ಯರು:-**

1. ಶ್ರೀ ಎಲ್.ವಿ. ಹೆನ್ರಿ, ಟೀಚರ್ಸ್ ಕಾಲೋನಿ RWA
2. ಎಂ.ಎ. ಪೊನ್ನಪ್ಪ (ಹೆಚ್.ಎಸ್.ಆರ್. 5ನೇ ಸೆಕ್ಟರ್)

**ಹಾಜರಿದ್ದ ಅಧಿಕಾರಿಗಳು:-**

1. ಶ್ರೀ ಪ್ರದೀಪ್ ಕುಮಾರ್, ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್-173 ಜಕ್ಕಸಂದ್ರ
2. ಶ್ರೀ ಎನ್. ದಿನೇಶ್, ಸಹಾಯಕ ಆರಕ್ಷಕ ನಿರೀಕ್ಷಕರು, ಮಡಿವಾಳ ಸಂಚಾರ ಪೋಲಿಸ್ ಠಾಣೆ
3. ಶ್ರೀ ಹೆಚ್.ಬಿ. ಧರಣೇಶ್ ಕುಮಾರ್, ಹೆಡ್ ಕಾನ್‌ಸ್ಟೇಬಲ್, ಮಡಿವಾಳ ಸಂಚಾರ ಪೋಲಿಸ್ ಠಾಣೆ
4. ಶ್ರೀ ಸಿ. ನರಸಿಂಹಲು, ಸೂಪರ್‌ವೈಸರ್
5. ಶ್ರೀ ಜಯರಾಮ ನಾಯ್ಕ .ಕೆ, ಕಿರಿಯ ಅಭಿಯಂತರರು
6. ಶ್ರೀ ಅರವಿಂದ .ಆರ್, ಕಿರಿಯ ಆರೋಗ್ಯ ನಿರೀಕ್ಷಕರು
7. ಶ್ರೀ ಸಿ.ಎನ್. ಶಂಕರೇಗೌಡ, ಕೆಲಸ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ
8. ಶ್ರೀ ಎಸ್. ಮುತ್ತಣ್ಣ, ಕಂದಾಯ ನಿರೀಕ್ಷಕರು

* * * * *

ಶ್ರೀ ಸಂಜೀವ್‌ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173 ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲು ತಿಳಿಸಿದರು.

ಶ್ರೀ ಪೊನ್ನಪ್ಪ ರವರು ಮಾತನಾಡಿ, ಕೋವಿಡ್ ಪಾಸಿಟಿವ್ ಬಂದಂತಹ ವ್ಯಕ್ತಿಗಳ ಮನೆಗಳಿಗೆ ಹಾಗೂ ರಸ್ತೆಗಳಿಗೆ ಸ್ಯಾನಿಟೈಸರ್ ಅನ್ನು ಕಡ್ಡಾಯವಾಗಿ ಸಿಂಪಡಿಸಲು ತಿಳಿಸಿದರು. ಇದಕ್ಕೆ ಉತ್ತರಿಸಿದ ನೋಡಲ್ ಅಧಿಕಾರಿಗಳು ಹಾಲಿ ಸಿಲ್ಕ್ ಬೋರ್ಡ್ ಬಸ್ ನಿಲ್ದಾಣದ ಬಳಿ ಕೋವಿಡ್-19 ಪರೀಕ್ಷೆಯನ್ನು ಉಚಿತವಾಗಿ ಕೈಗೊಳ್ಳುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಿದರು. ಹಾಗೂ ಸರ್ಕಾರ/ಪಾಲಿಕೆಯ ಮಾರ್ಗಸೂಚಿಗಳನ್ವಯ ಬಿ.ಬಿ.ಎಂ.ಪಿ ವತಿಯಿಂದ ಮಾರ್ಷಲ್‌ಗಳನ್ನು ಉಪಯೋಗಿಸಿಕೊಂಡು ಮಾಸ್ಕ್ ಧರಿಸದೇ ಹೊರಗಡೆ ಸಂಚರಿಸುವವರ ವಿರುದ್ಧದ ದಂಡ ವಿಧಿಸಲು ಕ್ರಮ ಕೈಗೊಳ್ಳುತ್ತಿದ್ದು, ಕೋವಿಡ್-19 ಅನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಜಾರಿಗೊಳಿಸಲಾಗಿದೆ ಎಂದು ಸಭೆಗೆ ತಿಳಿಸಿದರು.



Scanned by CamScanner

ಶ್ರೀ ಎಲ್.ವಿ. ಹೆನ್ರಿ ರವರು ಮಾತನಾಡಿ, ವಾರ್ಡ್‌ನ ನಿವಾಸಿಗಳು ಕಸವನ್ನು ಬೆಳಗಿನ ಜಾವ Walking ಸಮಯದಲ್ಲಿ ಬ್ಲಾಕ್‌ಸ್ಪಾಟ್‌ಗಳಲ್ಲಿ ಎಸೆಯುವುದನ್ನು ಅಭ್ಯಾಸ ಮಾಡಿಕೊಂಡಿದ್ದು, ಆದಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಬ್ಲಾಕ್‌ಸ್ಪಾಟ್‌ಗಳು ನಿರ್ಮಾಣವಾಗುತ್ತಿವೆ. ಆದುದರಿಂದ ಕಸವನ್ನು ಮನೆ ಕಸ ಸಂಗ್ರಹಿಸುವ ವಾಹನಗಳಿಗೆ ಹಾಕುವಂತೆ ಜಾರಿಗೊಳಿಸಲು ಮಾರ್ಷಲ್‌ಗಳನ್ನು ಬ್ಲಾಕ್‌ಸ್ಪಾಟ್‌ಗಳಲ್ಲಿ ನಿಯೋಜಿಸಿ, ಕಸ ಹಾಕುವವರ ವಿರುದ್ಧ ದಂಡ ವಿಧಿಸುವಂತೆ ತಿಳಿಸಿದರು. ಇದರಿಂದಾಗಿ ಎಲ್ಲೆಂದರಲ್ಲಿ ಕಸವನ್ನು ಎಸೆಯುವುದು ಹಾಗೂ ಬ್ಲಾಕ್‌ಸ್ಪಾಟ್‌ಗಳ ನಿರ್ಮಾಣವನ್ನು ತಪ್ಪಿಸಬಹುದಾಗಿದೆ ಎಂದು ತಿಳಿಸಿದರು. ಶ್ರೀ ಅರವಿಂದ, ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಈ ಬಗ್ಗೆ ಮಾತನಾಡಿ ಮಾರ್ಷಲ್‌ಗಳೊಂದಿಗೆ ಬ್ಲಾಕ್‌ಸ್ಪಾಟ್‌ಗಳಲ್ಲಿ ಬೆಳಗಿನ ಸಮಯದಲ್ಲಿ ಬ್ಲಾಕ್‌ಸ್ಪಾಟ್‌ಗಳಲ್ಲಿ ನಿಂತು ಕಸ ಎಸೆಯುವವರ ವಿರುದ್ಧ ಸ್ಥಳದಲ್ಲಿಯೇ ದಂಡ ವಿಧಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಶ್ರೀ ಎಲ್.ವಿ. ಹೆನ್ರಿ ರವರು ಮಾತನಾಡಿ, ಬ್ಲಾಕ್‌ಸ್ಪಾಟ್‌ಗಳ ಸ್ಥಳಗಳಲ್ಲಿ ಸಿ.ಸಿ. ಕ್ಯಾಮೆರಾಗಳನ್ನು ಅಳವಡಿಸುವುದು ಹಾಗೂ ಪ್ರತಿ ದಿನ ಬ್ಲಾಕ್‌ಸ್ಪಾಟ್‌ಗಳ ಜಾಗವನ್ನು ಸ್ವಚ್ಛಗೊಳಿಸಬೇಕೆಂದು ತಿಳಿಸಿದರು ಮತ್ತು ಹಾಲಿ ಬುಧವಾರ ಮತ್ತು ಶುಕ್ರವಾರಗಳಂದು ಒಣ ಕಸವನ್ನು ಮಾತ್ರ ತೆಗೆಯುತ್ತಿದ್ದು, ಉಳಿದ ದಿನಗಳಲ್ಲಿ ಹಸಿಕಸ ತೆಗೆಯುತ್ತಿದ್ದು, ಮಂಗಳವಾರದ ಕಸವನ್ನು ಗುರುವಾರದ ಬೆಳಗ್ಗೆ ವರೆಗೂ ಸಂಗ್ರಹಿಸುವುದು ಕಷ್ಟಕರವಾಗಿರುವುದರ ಬಗ್ಗೆ ಶ್ರೀ ಎಲ್.ವಿ. ಹೆನ್ರಿ ರವರು ಸಭೆಯ ಗಮನಕ್ಕೆ ತಂದರು. ಇದಕ್ಕೆ ಉತ್ತರಿಸಿದ ಶ್ರೀ ಅರವಿಂದ, ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಹೊಸದಾಗಿ ಟೆಂಡರ್ ಕರೆಯುವಾಗ ಪ್ರತಿದಿನವೂ ಹಸಿಕಸವನ್ನು ಸಂಗ್ರಹಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

ಶ್ರೀ ಪೊನ್ನಪ್ಪ ರವರು ಮಾತನಾಡಿ, ಸಿಲ್ಕ್ ಬೋರ್ಡ್ ಹತ್ತಿರ ಸಾರ್ವಜನಿಕರು ಹಾಗೂ ಸ್ಥಳೀಯ ನಿವಾಸಿಗಳು ಮಡಿವಾಳ ಮಾರ್ಕೆಟ್ ಮುಂಭಾಗ ಮತ್ತು ಪೋಲಿಸ್ ಸ್ಟೇಷನ್ ಸುತ್ತಮುತ್ತಲಿನ ಸ್ಥಳಗಳಲ್ಲಿ ಕಸವನ್ನು ಹಾಕುತ್ತಿರುತ್ತಾರೆ. ಆದುದರಿಂದ ಸದರಿ ಜಾಗದಲ್ಲಿ ಕಸವನ್ನು ಹಾಕದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ತಿಳಿಸಿದರು ಹಾಗೂ 14ನೇ ಮುಖ್ಯರಸ್ತೆ ಮತ್ತು ಟೀಚರ್ಸ್ ಕಾಲೋನಿ ಸರ್ವೀಸ್ ರಸ್ತೆಗಳಲ್ಲಿ ನೀರು ಸುಗಮವಾಗಿ ಹರಿಯಲು ಹೂಳು ತೆಗೆಯುವ / ಚರಂಡಿ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದ್ದು, ಸಮರ್ಪಕವಾಗಿ ಹೂಳು ತೆಗೆಯುವುದನ್ನು ಖಾತ್ರಿಪಡಿಸಿಕೊಳ್ಳಲು ಹಾಗೂ ಅಲ್ಲಲ್ಲಿ ಗಿಡ ನೆಡಲು ಸರ್ವೀಸ್ ರಸ್ತೆಯಲ್ಲಿ ಹ್ಯೂಮ್ ಪೈಪ್‌ಗಳನ್ನು ಅಳವಡಿಸಲು ಸಭೆಯ ಗಮನಕ್ಕೆ ತಂದರು

ಶ್ರೀ ಪೊನ್ನಪ್ಪ ರವರು ಮಾತನಾಡಿ, 14ನೇ ಮುಖ್ಯರಸ್ತೆಯಲ್ಲಿ ಎಲ್.ಇ.ಡಿ. ದೀಪವುಳ್ಳ ರಸ್ತೆ ದೀಪಗಳನ್ನು ರಸ್ತೆಯ ಮಧ್ಯದಲ್ಲಿ ಅಳವಡಿಸಬೇಕೆಂದು ತಿಳಿಸಿದರು ಹಾಗೂ 6ನೇ ಮುಖ್ಯರಸ್ತೆ ಟೀಚರ್ಸ್ ಕಾಲೋನಿ ಹಾಗೂ ವೆಂಕಟಾಪುರ ಮುಖ್ಯರಸ್ತೆ ಸಂಪರ್ಕಿಸುವ ರಸ್ತೆಯಲ್ಲಿ ಬೀದಿ ಬದಿಯ ವ್ಯಾಪಾರಿಗಳನ್ನು ನಿಯಂತ್ರಿಸಲು ಸಭೆಯಲ್ಲಿ ಹಾಜರಾಗಿದ್ದ ಸಂಚಾರ ಪೋಲಿಸ್ ಅಧಿಕಾರಿಗಳ ಗಮನಕ್ಕೆ ತಂದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಯನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಸದಸ್ಯ ಕಾರ್ಯದರ್ಶಿ ಮತ್ತು ಸಭೆಯಲ್ಲಿ ಹಾಜರಾಗಿದ್ದ ಎಲ್ಲಾ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಮುಂದಿನ ಸಭೆಯಲ್ಲಿ ಅನುಷ್ಠಾನಗೊಳಿಸಿರುವ ಬಗ್ಗೆ ಮಾಹಿತಿಯನ್ನು ಒದಗಿಸಬೇಕೆಂದು ತಿಳಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

10/11/2020
(ಶ್ರೀ. ಪ್ರದೀಪ್ ಕುಮಾರ್.ಆರ್)
ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್-173 ಜಕ್ಕಸಂದ್ರ

10-11-2020
(ಶ್ರೀ ಸಂಜೀವಕುಮಾರ್)
ನೋಡಲ್ ಅಧಿಕಾರಿಗಳು
ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್-173 ಜಕ್ಕಸಂದ್ರ



Scanned by CamScanner



Scanned by CamScanner



Scanned by CamScanner